# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ : 34(99)
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ).
ಉತ್ತರಿಸುವ ದಿನಾಂಕ : 19/12/2022.
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಕಾಲ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅನುದಾನಿತ ಶಾಲಾ ಕಾಲೇಜುಗಳಲ್ಲಿ ದಿನಾಂಕ:01.04.2006ರ ನಂತರ ನೇಮಕಗೊಂಡು ವೇತನ ಪಡೆಯುತ್ತಿರುವ ಹಾಗೂ ಮೊದಲೇ ನೇಮಕಗೊಂಡು ನಂತರ ವೇತನಕ್ಕೊಳಪಟ್ಟು ವೇತನ ಪಡೆಯುತ್ತಿರುವ ನೌಕರರಿಗೆ ಯಾವುದೇ ನಿಶ್ಚಿತ ಪಿಂಚಣಿ ಸೌಲಭ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಸರ್ಕಾರದ ಆದೇಶದಂತೆ ಆಡಳಿತ ಮಂಡಳಿಯವರು ತಮ್ಮ ಪಾಲನ್ನು ಪಾವತಿಸದಿರುವುದರಿಂದ ಸದರಿ ನೌಕರರರು ಸಂಪೂರ್ಣವಾಗಿ ಪಿಂಚಣಿ ಸೌಲಭ್ಯದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಇ) | ದಿನಾಂಕ:01.04.2006ರ ನಂತರ ಸರ್ಕಾರಿ ನೌಕರರಿಗೆ ನೀಡುತ್ತಿರುವ ಪಿಂಚಣಿ ಸೌಲಭ್ಯವನ್ನು ಅನುದಾನಿತ ನೌಕರರಿಗೂ ಸರ್ಕಾರವೇ ಭರಿಸಲು ಇರುವ ತೊಂದರೆಗಳೇನು; (ವಿವರಗಳೊಡನೆ ಮಾಹಿತಿ ನೀಡುವುದು) | ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಪಿಂಚಣಿ ಒದಗಿಸುವ ಕುರಿತು ಸರ್ಕಾರದ ಆದೇಶ ಸಂಖ್ಯೆ:FD (SPL)04 PET 2005, ದಿನಾಂಕ: 31.03.2006ರ ಕ್ರಮ ಸಂಖ್ಯೆ: 08ರಲ್ಲಿ ಈ ಕೆಳಗಿನಂತೆ ತಿಳಿಸಲಾಗಿದೆ.<br>*...(8) ಸಹಾಯಾನುದಾನ ಶಿಕ್ಷಣ ಸಂಸ್ಥೆಗಳ ನೌಕರರಿಗೆ, ಗೊತ್ತು ಮಾಡಿದ ಪ್ರಯೋಜನ ಪಿಂಚಣಿಯನ್ನು ದಿನಾಂಕ:01.04.2006 ರಂದು ಅಥವಾ ಅದರ ತರುವಾಯ ಸೇರುವ ಹೊಸದಾಗಿ ನೇಮಕಗೊಂಡ ಸಿಬ್ಬಂದಿಗೆ ನಿಲ್ಲಿಸಿ ಬಿಡತಕ್ಕದ್ದು. ನೂತನ ನಿಗಧಿತ ವಂತಿಗೆ ಪಿಂಚಣಿ ಯೋಜನೆಯು, ಆಯ್ಕೆಯ* |

| | | |
|---|---|---|
| | | *ಅವಕಾಶದ ಆಧಾರದ ಮೇಲೆ ನೌಕರನಿಗೆ ಮತ್ತು ನಿಯೋಜಕನಿಗೆ ಅನ್ವಯವಾಗತಕ್ಕದ್ದು ಮತ್ತು ಆಯ್ಕೆಯ ಅವಕಾಶವನ್ನು ಇಬ್ಬರಿಂದಲೂ ಚಲಾಯಿಸತಕ್ಕುದು. ಆದರೆ, ನಿಯೋಜಕರ ವಂತಿಗೆಯನ್ನು ಸಂಬಂಧಪಟ್ಟ ಸಂಸ್ಥೆಗಳು ಭರಿಸತಕ್ಕುದು. ಆದರೆ ರಾಜ್ಯ ಸರ್ಕಾರವಲ್ಲ.*<br>ಈ ಆದೇಶವು ದಿನಾಂಕ: 01/04/2006ರಿಂದ ಜಾರಿಗೆ ಬಂದಿದ್ದು, ದಿನಾಂಕ: 01/04/2006ರ ನಂತರ ಅನುದಾನಸಹಿತ ಅನುಮೋದನೆಗೊಂಡ ಅನುದಾನಿತ ಖಾಸಗಿ ಶಾಲೆ/ ಕಾಲೇಜುಗಳಲ್ಲಿನ ಸಿಬ್ಬಂದಿಗಳಿಗೆ ಈ ಮೇಲಿನ ನಿಯಮ ಅನ್ವಯವಾಗುತ್ತದೆ. ಅನುದಾನಿತ ಸಿಬ್ಬಂದಿಗಳ ಸೇವಾ ಸೌಲಭ್ಯಗಳು ಅನುದಾನಸಹಿತವಾಗಿ ಅನುಮೋದನೆಗೊಂಡ ದಿನಾಂಕದಿಂದ ಅನ್ವಯವಾಗುತ್ತದೆ. ಆದುದರಿಂದ 2006 ರ ಪೂರ್ವದಲ್ಲಿ ಅನುದಾನರಹಿತವಾಗಿ ನೇಮಕಗೊಂಡ ಸಿಬ್ಬಂದಿಗಳು ದಿನಾಂಕ: 01/04/2006ರ ನಂತರ ಅನುದಾನಕ್ಕೆ ಒಳಪಟ್ಟಲ್ಲಿ ಅಂತಹ ಸಿಬ್ಬಂದಿಗಳು ಹೊಸ ಪಿಂಚಣಿ ಯೋಜನೆ (NPS) ವ್ಯಾಪ್ತಿಗೆ ಒಳಪಡುತ್ತಾರೆ. |
| ಈ) | ಸರ್ಕಾರಿ ಶಾಲಾ ಕಾಲೇಜಿನ ನೌಕರರಿಗೆ ನೀಡುತ್ತಿರುವ ಜ್ಯೋತಿ ಸಂಜೀವಿನಿ ಮತ್ತಿತರ ವೈದ್ಯಕೀಯ ಸೌಲಭ್ಯಗಳನ್ನು ಅನುದಾನಿತ ನೌಕರರಿಗೆ ಯಾವ ಕಾಲಮಿತಿಯಲ್ಲಿ ವಿಸ್ತರಿಸಲಾಗುವುದು? | ಅನುದಾನಿತ ಶಾಲಾ ಕಾಲೇಜುಗಳ ನೌಕರರು ಕರ್ನಾಟಕ ಶಿಕ್ಷಣ ಅಧಿನಿಯಮ-1983 ಮತ್ತು ಅದರಡಿ ರಚಿಸಲ್ಪಟ್ಟ ಕರ್ನಾಟಕ ಶಿಕ್ಷಣ ಸಂಸ್ಥೆಗಳ (Classification, Regulation and Prescrition of Curricula) ನಿಯಮಗಳು-1995ರ ವ್ಯಾಪ್ತಿಗೆ ಒಳಪಡುತ್ತಾರೆ. ಇವರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲಾಗುವುದಿಲ್ಲ.<br>ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು-1963ರ ವ್ಯಾಪ್ತಿಗೆ ಒಳಪಡುವುದಿಲ್ಲ ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು(ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಮತ್ತು ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ |

| | | |
|---|---|---|
| | | ಅನುಬಂಧ -ii (3) ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯ ನೀಡಲು ಅವಕಾಶವಿರುವುದಿಲ್ಲ. ಆದುದರಿಂದ ಅನುದಾನಿತ ಸಿಬ್ಬಂದಿಗಳು ಜ್ಯೋತಿ ಸಂಜೀವಿನಿ ಯೋಜನೆಯ ವ್ಯಾಪ್ತಿಗೆ ಬರುವುದಿಲ್ಲ. |

ಸಂಖ್ಯೆ: ಇಪಿ 617 ಎಸ್‌ಇಎಸ್ 2022

(ಬಿ.ಸಿ.ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಹಾಗೂ ಸಕಾಲ ಸಚಿವರು